**ANDOLANA (KANNADA DAILY)**

Date : March 23, 2013 Page : 2

Edition: Mysore Language: Kannada

# ಭಾರತ ಶೀಘ್ರ ಅಭಿವೃದ್ಧಿ ಹೊಂದಿದ ರಾಷ್ಟ್ರವಾಗಲಿದೆ

## ಎಸ್‌ಡಿಎಂ-ಐಎಂಡಿ ಘಟಿಕೋತ್ಸವದಲ್ಲಿ ಡಾ.ಮುತ್ತುರಾಮನ್

ಮೈಸೂರು,ಮಾ.೨೨-ಕೆಲವೇ ವರ್ಷಗಳಲ್ಲಿ ಆರ್ಥಿಕವಾಗಿ ಅಭಿವೃದ್ಧಿ ಹೊಂದಿದ ರಾಷ್ಟ್ರಗಳ ಸಾಲಿನಲ್ಲಿ ಭಾರತಕ್ಕೆ ಮೂರನೇ ಸ್ಥಾನ ಲಭಿಸಲಿದೆ ಎಂದು ಜೆಮ್ ಷೆಡ್‌ಪುರದ ಟಾಟಾ ಸ್ಟೀಲ್ ಕಂಪನಿ ಉಪಾಧ್ಯಕ್ಷ ಡಾ.ಮುತ್ತುರಾಮನ್ ವಿಶ್ವಾಸದಿಂದ ಹೇಳಿದರು.

ಚಾಮುಂಡಿಬೆಟ್ಟದ ತಪ್ಪಲಲ್ಲಿರುವ ಶ್ರೀ ಧರ್ಮಸ್ಥಳ ಮಂಜುನಾಥೇಶ್ವರ ಇನ್ಸ್‌ಟಿಟ್ಯೂಟ್ ಫಾರ್ ಮ್ಯಾನೇಜ್‌ಮೆಂಟ್ ಡೆವಲಪ್‌ಮೆಂಟ್(ಎಸ್‌ಡಿಎಂ-ಐಎಂಡಿ) ಶುಕ್ರವಾರ ಕಾಲೇಜಿನ ಆವರಣದಲ್ಲಿ ಆಯೋಜಿಸಿದ್ದ ಕಾಲೇಜಿನ ೧೮ನೇ ಘಟಿಕೋತ್ಸವ ಸಮಾರಂಭದಲ್ಲಿ ಘಟಿಕೋತ್ಸವ ಭಾಷಣ ಮಾಡಿ ಅವರು, ಭಾರತ ಆರ್ಥಿಕವಾಗಿ ಮುಂದುವರಿದ ಪ್ರಪಂಚದ ರಾಷ್ಟ್ರಗಳಲ್ಲಿ ಮೂರನೇ ಬಲಿಷ್ಠ ರಾಷ್ಟ್ರವಾಗಿ ಹೊರಹೊಮ್ಮಲಿದೆ ಎಂದು ಹೇಳಿದರು.



ಎಸ್‌ಡಿಎಂ-ಐಎಂಬಿ ಕಾಲೇಜಿನ ಘಟಿಕೋತ್ಸವದಲ್ಲಿ ಚಿನ್ನದ ಪದಕ ಪಡೆದ ವಿದ್ಯಾರ್ಥಿ-ವಿದ್ಯಾರ್ಥಿನಿಯರೊಡನೆ ಡಾ.ವೀರೇಂದ್ರ ಹೆಗ್ಗಡೆ, ಡಾ.ಮುತ್ತುರಾಮನ್, ಡಾ.ಎನ್.ಆರ್.ಪರಶುರಾಮನ್ ಮತ್ತಿತರರು ಚಿತ್ರದಲ್ಲಿದ್ದಾರೆ.

ಭಾರತದಲ್ಲಿ ಮಾನವ ಸಂಪನ್ಮೂಲವನ್ನು ಬಳಸಿಕೊಂಡು ಸಾಕಷ್ಟು ಸಾಧನೆ ಮಾಡಬಹುದಾಗಿದ್ದು, ಅದನ್ನು ಸಮರ್ಪಕವಾಗಿ ಬಳಸಿಕೊಳ್ಳುವ ಕಡೆ ಚಿಂತಿಸಬೇಕಿದೆ. ಇಂದಿನ ಕಾರ್ಪೋರೇಟ್ ಜಗತ್ತಿನಲ್ಲಿ ಭಾರತೀಯರು ವಿದೇಶಕ್ಕೆ ಹಾರುವ ಮೂಲಕ ತಮ್ಮ ಜೀವನ ಕಟ್ಟಿಕೊಳ್ಳುತ್ತಿದ್ದಾರೆ.

ಅದನ್ನು ಬಿಟ್ಟು ಭ್ರಷ್ಟಾಚಾರವನ್ನು ತಡೆದು, ಮೂಲ ಸೌಲಭ್ಯಗಳನ್ನು ಪಡೆದು ಬಲಿಷ್ಠ ಭಾರತ ನಿರ್ಮಾಣ ಮಾಡುವ ಕಡೆ ಗಮನ ಹರಿಸಬೇಕಿದೆ ಎಂದು ಸಲಹೆ ನೀಡಿದರು.

ಅಭಿವೃದ್ಧಿಯಲ್ಲಿ ಸಮಾನತೆ ಇರಬೇಕು. ಆದರೆ ಶತಮಾನಗಳಿಂದಲೂ ಅದು ಸಿಕ್ಕಿಲ್ಲ. ಜಾತಿ ವ್ಯವಸ್ಥೆಯಿಂದ ಸಾಮಾಜಿಕ ವ್ಯವಸ್ಥೆಯಲ್ಲಿ ಅಸಮಾನತೆ ಹೆಚ್ಚಿದೆ.

ಇದರಿಂದ ದೇಶದ ಅಭಿವೃದ್ಧಿ ಸಾಧ್ಯವಿಲ್ಲ. ಮೆರಿಟ್ ಇದ್ದವರಿಗೆ ಮಾತ್ರ ಉದ್ಯೋಗ ನೀಡಬೇಕು ಎಂಬ ವಾದ ಸರಿಯಲ್ಲ.

ಗ್ರಾಮೀಣ ಪ್ರದೇಶದಲ್ಲಿ ಉನ್ನತ ಶಿಕ್ಷಣ ಪಡೆದವರು ಕಡಿಮೆಯಿದ್ದು, ಅವರಿಗೆ ಉದ್ಯೋಗ, ಶಿಕ್ಷಣದಲ್ಲಿ ಮೀಸಲಾತಿ ಬೇಕಿದೆ ಎಂದು ಹೇಳಿದರು.

ಇದೇ ಸಂದರ್ಭದಲ್ಲಿ ಕಾಲೇಜಿನ ಪದವೀಧರರಿಗೆ ಪದವಿ ಪ್ರದಾನ ಮಾಡಿ, ಅಲ್ಲದೇ, ಅತಿ ಹೆಚ್ಚು ಅಂಕ ಪಡೆದ ವಿದ್ಯಾರ್ಥಿಗಳಿಗೆ ಚಿನ್ನದ ಪದಕ ನೀಡಿ ಗೌರವಿಸಲಾಯಿತು.

ಶ್ರೀ ಧರ್ಮಸ್ಥಳ ಧರ್ಮಾಧಿಕಾರಿ ಡಾ.ಡಿ.ವೀರೇಂದ್ರ ಹೆಗ್ಗಡೆ, ಕಾಲೇಜು ಪ್ರಾಂಶುಪಾಲ ಡಾ.ಎನ್.ಆರ್.ಪರಶುರಾಮನ್, ಸ್ನಾತಕೋತ್ತರ ಅಧ್ಯಯನ ಕೇಂದ್ರದ ಮುಖ್ಯಸ್ಥೆ ಡಾ.ನೀತುಗಣಪತಿ, ಎ.ಎಚ್.ಕರ್ಲು, ಡಾ.ಎಸ್.ಪ್ರಭಾಕರ್, ಡಾ.ಪ್ರಸನ್ನಚಂದ್ರ, ಡಾ.ಎಚ್.ಗಾಯತ್ರಿ ಮತ್ತಿತರರು ಹಾಜರಿದ್ದರು.